ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಯವರ ಕಾರ್ಯಾಲಯ,
ದಕ್ಷಿಣ ಕನ್ನಡ ಜಿಲ್ಲೆ,
ಮಂಗಳೂರು – 575 001.

ಕರ್ನಾಟಕ ಸರಕಾರ
(ಕಂದಾಯ ಇಲಾಖೆ)

Deputy Commissioner &
District Magistrate's Office,
Dakshina Kannada District,
Mangaluru – 575 001.

ನಂ. ಎಂಎಜಿ(2)ಸಿಆರ್ 156/2021/133465/ಸಿ4/71 ದಿನಾಂಕ: 26-12-2022

# ಸುತ್ತೋಲೆ

ವಿಷಯ: ಕೋವಿಡ್-19 ಪರಿಸ್ಥಿತಿಯ ಹಿನ್ನಲೆಯಲ್ಲಿ ಪಾಲಿಸಬೇಕಾದ ಶಿಷ್ಟಾಚಾರ ಕ್ರಮಗಳ ಕುರಿತು.

ಉಲ್ಲೇಖ:
1) ಕಾರ್ಯದರ್ಶಿಗಳು, ಭಾರತ ಸರ್ಕಾರ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ: Z.228015/182/2021-DM cell ; ದಿನಾಂಕ: 20-12-2022.
2) ರಾಜ್ಯ ಕೋವಿಡ್-19 ತಾಂತ್ರಿಕ ಸಲಹಾ ಸಮಿತಿಯ 187 & 188 ಸಭೆಯ ನಡಾವಳಿಯಂತೆ, ದಿನಾಂಕ: 21-12-2022 / 22-12-2022.
3) ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು ಇವರ ಪತ್ರ ಸಂಖ್ಯೆ: NVBDCP/EST-77/Covid-19/2020-21 ; ದಿನಾಂಕ: 22-12-2022.

=======@=======

## ಸಲಹಾ ಪತ್ರ

## (ಸಾರ್ವಜನಿಕರು ಹಾಗೂ ಸಭೆ ಸಮಾರಂಭಗಳ ಆಯೋಜಕರಿಗೆ)

ಪ್ರಸ್ತುತ, ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕೋವಿಡ್-19 ಪರಿಸ್ಥಿತಿಯು ನಿಯಂತ್ರಣದಲ್ಲಿದೆ. ಆದಾಗ್ಯೂ, ಪ್ರಪಂಚದ ಕೆಲವು ದೇಶಗಳಲ್ಲಿ ಕೋವಿಡ್-19 ಪ್ರಕರಣಗಳಲ್ಲಿ ಏರಿಕೆಯಾಗಿದ್ದು, ಮುಂಬರುವ ಹೊಸವರ್ಷಾಚರಣೆಯ ಸಂದರ್ಭದಲ್ಲಿ ಎಚ್ಚರ ವಹಿಸುವುದು ಅಗತ್ಯವಾಗಿರುತ್ತದೆ.

ಈ ಹಿನ್ನಲೆಯಲ್ಲಿ, ಭಾರತ ಸರ್ಕಾರವು ಹೊರಡಿಸಿರುವ ಮಾರ್ಗಸೂಚಿಯಂತೆ, ಸನ್ಮಾನ್ಯ ಮುಖ್ಯಮಂತ್ರಿಗಳು ಹಾಗೂ ಆರೋಗ್ಯ ಸಚಿವರು, ಜಿಲ್ಲೆಯ ಕೋವಿಡ್-19 ಪರಿಸ್ಥಿತಿಯನ್ನು ಪರಿಶೀಲಿಸಿದ್ದು, ಪೂರ್ವಭಾವಿಯಾಗಿ ಸಾರ್ವಜನಿಕರು ಈ ಕೆಳಗಿನಂತೆ ಕೋವಿಡ್-19 ಗೆ ಸಂಬಂಧಪಟ್ಟ ಕ್ರಮಗಳನ್ನು ಪಾಲಿಸುವುದು ಅವಶ್ಯವಾಗಿರುತ್ತದೆ.

- ಮುಚ್ಚಿದ ಸಂರಕ್ಷಣೆಗಳಾದ (closed spaces) ಪಬ್, ಬಾರ್, ರೆಸ್ಟೋರೆಂಟ್, ಸಿನೆಮಾ ಹಾಲ್‌ಗಳು, ಶಾಪಿಂಗ್ ಮಾಲ್, ಕಛೇರಿಗಳು ಸೇರಿದಂತೆ ಬಸ್, ರೈಲು, ಮೆಟ್ರೋ, ವಿಮಾನಯಾನ ಸಂದರ್ಭದಲ್ಲಿ ಮಾಸ್ಕ್ ಧರಿಸುವುದು ಅಗತ್ಯವಾಗಿರುತ್ತದೆ . ಅದರಲ್ಲೂ, ವಿಶೇಷವಾಗಿ ವೃದ್ಧರು ಹಾಗೂ ಆರೋಗ್ಯ ಸಮಸ್ಯೆಗಳಿಂದ ಬಳಲುತ್ತಿರುವವರು, ಒಳಾಂಗಣದಲ್ಲಿದ್ದಾಗಲೂ ಮಾಸ್ಕ್ ಧರಿಸುವುದು ಉತ್ತಮ.
- ಅರ್ಹರೆಲ್ಲರೂ ಕೋವಿಡ್-19 ಲಸಿಕೆಯ ಪ್ರಿಕಾಶನರಿ ಡೋಸ್ ಅನ್ನು ಶೀಘ್ರವಾಗಿ ಪಡೆದುಕೊಳ್ಳುವುದು.

- ಉಸಿರಾಟದ ಸಮಸ್ಯೆ ಹಾಗೂ ಕೋವಿಡ್-19 ಸೋಂಕಿನ ಲಕ್ಷಣಗಳನ್ನು ಹೊಂದಿರುವವರು, ಸ್ವಯಂ ಪ್ರತ್ಯೇಕವಾಗಿ, ಪರೀಕ್ಷೆ ಮಾಡಿಸಿಕೊಳ್ಳುವುದು ಹಾಗೂ ಫಲಿತಾಂಶದ ಆಧಾರದ ಮೇಲೆ ಚಾಲ್ತಿಯಲ್ಲಿರುವ ಪ್ರಮಾಣೀಕೃತ ಶಿಷ್ಟಾಚಾರದ ಅನ್ವಯ ಕ್ರಮಗಳನ್ನು ಪಾಲಿಸುವುದು.
- ಉತ್ತಮ ದೈಹಿಕ ಹಾಗೂ ಮಾನಸಿಕ ಆರೋಗ್ಯಕ್ಕಾಗಿ ಮಧ್ಯಮ ಪ್ರಮಾಣದ ವ್ಯಾಯಾಮ, ಉಸಿರಾಟದ ವ್ಯಾಯಾಮಗಳು ಹಾಗೂ ಧ್ಯಾನವನ್ನು ಮಾಡಬಹುದಾಗಿದೆ.

<u>ಮುಂದುವರೆದು, ಸಭೆ ಹಾಗೂ ಸಮಾರಂಭಗಳ ಆಯೋಜಕರು ಈ ಕೆಳಗಿನ ಮಾರ್ಗಸೂಚಿಯನ್ನು ಪಾಲಿಸುವಂತೆ ನಿರೀಕ್ಷಿಸಲಾಗಿದೆ.</u>

- ಸಾರ್ವಜನಿಕ ಹಾಗೂ ಸಾಮಾಜಿಕ ಕಾರ್ಯಕ್ರಮಗಳನ್ನು ಆದಷ್ಟೂ ಹೊರಾಂಗಣದಲ್ಲಿ ಮತ್ತು ಒಳ್ಳೆಯ ಗಾಳಿ-ಬೆಳಕಿನ ವ್ಯವಸ್ಥೆ ಇರುವ ಸ್ಥಳಗಳಲ್ಲಿ ಹಗಲು ಹೊತ್ತಿನಲ್ಲಿ ನಡೆಸುವುದರಿಂದ ಆರೋಗ್ಯದ ಮೇಲೆ ಮುಂಜಾನೆ ಹಾಗೂ ಸಂಜೆಯ ಶೀತ ಗಾಳಿಯ ಪರಿಣಾಮವನ್ನು ತಡೆಗಟ್ಟಬಹುದು.
- ಒಳಾಂಗಣ ಕಾರ್ಯಕ್ರಮಗಳಲ್ಲಿ ಮಾಸ್ಕ್ ಧರಿಸುವಂತೆ ಸಲಹೆ ನೀಡಲಾಗಿದ್ದು, ದೈಹಿಕ ಅಂತರವನ್ನು ಪಾಲಿಸುವುದು ಅಗತ್ಯವಾಗಿರುತ್ತದೆ.
- ಕೈಗಾರಿಕಾ ಸಂಸ್ಥೆಗಳಲ್ಲಿ, ಗಾರ್ಮೆಂಟ್ಸ್ ಇತರೇ ಕಾರ್ಖಾನೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳು ಕಡ್ಡಾಯವಾಗಿ ದೈಹಿಕ ಅಂತರ ಮತ್ತು ಮಾಸ್ಕ್ ಧರಿಸುವುದು.
- ಹೆಚ್ಚಿನ ಜನರು ಗುಂಪುಗೂಡುವಿಕೆಯನ್ನು, ವಿಶೇಷವಾಗಿ ಒಳಾಂಗಣಗಳಲ್ಲಿ ಗುಂಪುಗೂಡುವಿಕೆಯನ್ನು ಕಟ್ಟುನಿಟ್ಟಾಗಿ ತಡೆಗಟ್ಟಬೇಕು.

ಕೋವಿಡ್-19 ಮುನ್ನೆಚ್ಚರಿಕೆ ಹಾಗೂ ನಿಯಂತ್ರಣದಲ್ಲಿ ಈವರೆಗೆ ಸಾಧಿಸಲಾಗಿರುವ ಉತ್ತಮ ಅಂಶಗಳನ್ನು ಉಳಿಸಿಕೊಳ್ಳುವ ನಿಟ್ಟಿನಲ್ಲಿ ಮೇಲೆ ತಿಳಿಸಿರುವ ಸಲಹೆಗಳನ್ನು ಪಾಲಿಸಲು ಸಾರ್ವಜನಿಕರು ಹಾಗೂ ಸಭೆ/ಸಮಾರಂಭಗಳ ಆಯೋಜಕರಿಗೆ ಈ ಮಾಹಿತಿಯನ್ನು ನಿಖರವಾಗಿ ಪ್ರಚುರಪಡಿಸುವುದು ಹಾಗೂ ಪಾಲನೆಯನ್ನು ಖಚಿತಪಡಿಸಿಕೊಳ್ಳುವಂತೆ ಜಿಲ್ಲೆಯ ಆರೋಗ್ಯ ಪ್ರಾಧಿಕಾರಗಳಿಗೆ ಈ ಮೂಲಕ ಸೂಚಿಸಿದೆ ಹಾಗೂ ಮುಂಬರುವ ದಿನಗಳಲ್ಲಿ ಕೋವಿಡ್-19 ಗೆ ಸಂಬಂಧಿಸಿದಂತೆ ಸರ್ಕಾರ ಹೊರಡಿಸುವ ಎಲ್ಲಾ ಆದೇಶಗಳನ್ನು ಕಡ್ಡಾಯವಾಗಿ ಪಾಲಿಸುವುದು.

ರವಿಕುಮಾರ್ ಎಂ.ಆರ್., ಭಾ.ಆ.ಸೇ.,
ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ,
ಹಾಗೂ ಅಧ್ಯಕ್ಷರು,
ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ,
ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.

ರಿಗೆ,

1. ಪೊಲೀಸ್ ಆಯುಕ್ತರು, ಮಂಗಳೂರು ನಗರ.
2. ಮುಖ್ಯ ಕಾರ್ಯನಿರ್ವಹಣಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತ್, ಮಂಗಳೂರು.
3. ಪೊಲೀಸ್ ಅಧೀಕ್ಷಕರು, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.

Website: www.dk.nic.in Phone: 0824-2220588 Fax: 0824-2441564 Email:dc.mnglr@gmail.com

4. ಆಯುಕ್ತರು, ಮಹಾನಗರ ಪಾಲಿಕೆ, ಮಂಗಳೂರು.

5. ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.

6. ಸಹಾಯಕ ಆಯುಕ್ತರು, ಮಂಗಳೂರು / ಪುತ್ತೂರು ಉಪವಿಭಾಗ.

7. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.

8. ಜಿಲ್ಲಾ ಶಸ್ತ್ರ ಚಿಕಿತ್ಸಕರು ಮತ್ತು ಅಧೀಕ್ಷಕರು, ವೆನ್ ಲಾಕ್ ಜಿಲ್ಲಾ ಆಸ್ಪತ್ರೆ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.

9. ಜಿಲ್ಲೆಯ ಎಲ್ಲಾ ತಹಶೀಲ್ದಾರರುಗಳಿಗೆ.

10. ಜಿಲ್ಲೆಯ ಎಲ್ಲಾ ತಾಲೂಕು ಆರೋಗ್ಯಾಧಿಕಾರಿಗಳಿಗೆ.

11. ಎಲ್ಲಾ ಜಿಲ್ಲಾ ಮಟ್ಟದ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳಿಗೆ.

12. ಹಿರಿಯ ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು - ಇವರು ಜಿಲ್ಲೆಯ ಎಲ್ಲಾ ಪ್ರಮುಖ ಸುದ್ದಿ ಮಾಧ್ಯಮಗಳಲ್ಲಿ ಪ್ರಚುರ ಪಡಿಸಲು ತಿಳಿಸಿದೆ.

Website: www.dk.nic.in Phone: 0824-2220588 Fax: 0824-2441564 Email:dc.mnglr@gmail.com